ಡಾ: ಎ.ಬಿ.ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) 12 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಇರುತ್ತವೆ. ವಿವರ ಈ ಕೆಳಕಂಡಂತೆ ಇರುತ್ತದೆ.

1.	ಕಗ್ಗಳಿ ಹುಂಡಿ	2.	ಬೆಗೂರು
3.	ಹಂಗಳ	4.	ತೆರಕ
5.	ಬಾತಹಳ್ಳಿ	6.	ಬಾರಗಿ
7.	ಹೊರೆಯಾಲ	8.	ಹೆಗ್ಗಡರ ಹಳ್ಳಿ
9.	ಪಂಡಗೂರು	10.	ರಂಗನಾಥಪುರ
11.	ಬನ್ನಿಕಾಳಪುರ	12.	ಬೊಮ್ಮಲಾಪುರ

ಆ) ಪ್ರಾಥಮಿಕ ಆರೋಗ್ಯ ಕೇಂದ್ರ ಬೊಮ್ಮಲಾಪುರದಲ್ಲಿ ಆರೋಗ್ಯ ಸ್ವಂತ ಕಟ್ಟಡ ಇರುವುದಿಲ್ಲ. ಜಿಲ್ಲಾ ಪಂಚಾಯತ್ ಅನುದಾನದಲ್ಲಿ ಸ್ವಂತ ಕಟ್ಟಡ ಹೊಂದಲು ಕ್ರಮ ಕೈಗೊಳ್ಳಲಾಗುವುದು.

ಇ) ಪ್ರಾಥಮಿಕ ಆರೋಗ್ಯ ಕೇಂದ್ರ ಹಂಗಳ ಮತ್ತು ಬರ್ಗಿ ಇಲ್ಲಿ ತಲಾ ಒಂದೊಂದು ಹುದ್ದೆ ಖಾಲಿ ಇರುತ್ತವೆ. 573 ವೈದ್ಯರುಗಳ ನೇಮಕಾತಿ ಮಾಡುವ ಪ್ರಕ್ರಿಯೆಯಲ್ಲಿದ್ದು ಅಂತಿಮ ಪಟ್ಟಿಯಾದ ನಂತರ ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಗುಂಡ್ಲುಪೇಟೆ ತಾಲ್ಲೂಕು ಗ್ರಾಮ ಪಂಚಾಯಿತಿಗಳಲ್ಲಿ ಕಾರ್ಯದರ್ಶಿ ಹುದ್ದೆಗಳು

1967 (2369) ಶ್ರೀ ಹೆಚ್.ಎಸ್.ಮಹಾದೇವಪ್ರಸಾದ್ (ಗುಂಡ್ಲುಪೇಟೆ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಗುಂಡ್ಲುಪೇಟೆ ತಾಲ್ಲೂಕು ಗ್ರಾಮ ಪಂಚಾಯಿತಿಗಳಲ್ಲಿ ಕಾರ್ಯದರ್ಶಿ ಹುದ್ದೆ ಎಷ್ಟು ಖಾಲಿ ಇವೆ? ಇವುಗಳನ್ನು ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ;

ಆ) ಬೇರೆ ಬೇರೆ ಇಲಾಖೆಯಲ್ಲಿ ದಿನಗೂಲಿ ಕೆಲಸಗಾರರಾಗಿದ್ದು ಖಾಯಂ ನೌಕರರಾದವರನ್ನು ಪಂಚಾಯಿತಿ ಕಾರ್ಯದರ್ಶಿಗಳನ್ನಾಗಿ ನೇಮಿಸಲಾಗಿದೆಯೇ;

ಇ) ಇವರುಗಳಿಗೆ ಕಾರ್ಯದರ್ಶಿಯಾಗಿ ಕೆಲಸ ನಿರ್ವಹಿಸಲು ತರಬೇತಿ ನೀಡಲಾಗಿದೆಯೇ?

ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

ಅ) ಗುಂಡ್ಲುಪೇಟೆ ತಾಲ್ಲೂಕು ಪಂಚಾಯಿತಿಗಳಲ್ಲಿ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 5 ಹುದ್ದೆಗಳು ಹಾಗೂ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-2 ನಾಲ್ಕು ಹುದ್ದೆಗಳು ಖಾಲಿ ಇರುತ್ತವೆ. ಈ ಹುದ್ದೆಗಳನ್ನು 2000-2001ನೇ ಸಾಲಿನಲ್ಲಿ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗುವುದು.

ಆ) ಹೌದು.

ಇ) ಇಲ್ಲ.